ಕರ್ನಾಟಕ ಸರ್ಕಾರ

ಸಂಖ್ಯೆ: ನಅಇ 37 ಬೆಮಪ್ರಾ 2022(ಇ-ಕಡತ)

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು, ದಿನಾಂಕ: 26-08-2022.



ಇವರಿಂದ,
ಸರ್ಕಾರದ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ,
ವಿಕಾಸ ಸೌಧ, ಬೆಂಗಳೂರು.

ಇವರಿಗೆ,

1. ನಿರ್ದೇಶಕರು ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
2. ನಿರ್ದೇಶಕರು ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು.
3. ಆಯುಕ್ತರು ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳು,
4. ಆಯುಕ್ತರು, ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು
5. ಪೌರಾಯುಕ್ತರು/ಮುಖ್ಯಾಧಿಕಾರಿಗಳು ರಾಜ್ಯದ ಎಲ್ಲಾ ನಗರಸಭೆ/ ಪುರಸಭೆ/ ಪಟ್ಟಣ ಪಂಚಾಯಿತಿಗಳು (ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರ ಮುಖಾಂತರ)
6. ಸದಸ್ಯ ಕಾರ್ಯದರ್ಶಿ, ರಾಜ್ಯದ ಎಲ್ಲಾ ನಗರ ಯೋಜನಾ ಪ್ರಾಧಿಕಾರಗಳು (ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ರವರ ಮುಖಾಂತರ)
7. ಪೌರಾಯುಕ್ತರು/ಮುಖ್ಯಾಧಿಕಾರಿಗಳು ರಾಜ್ಯದ ಎಲ್ಲಾ ನಗರಸಭೆ/ ಪುರಸಭೆ/ ಪಟ್ಟಣ ಪಂಚಾಯಿತಿ ಯೋಜನಾ ಪ್ರಾಧಿಕಾರಗಳು (ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ರವರ ಮುಖಾಂತರ)

ಮಾನ್ಯರೆ

ವಿಷಯ: ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿಯ ಮತ್ತು ಜಿಲ್ಲಾ ಮುಖ್ಯ ರಸ್ತೆಗಳ ಪರಿಮಿತಿಯಲ್ಲಿ ಕಟ್ಟಡಗಳು ನಿರ್ಮಾಣವಾಗುತ್ತಿರುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ:ಪಿಡಬ್ಲ್ಯೂಡಿ 362 ಸಿ ಆರ್ ಎಂ 98, ದಿನಾಂಕ:09.10.1998
ಸರ್ಕಾರದ ಆದೇಶ ಸಂಖ್ಯೆ: ಲೋಇ 23 ಆರ್ ಡಿ ಎಫ್ 2004, ದಿನಾಂಕ:18.10.2004
ಸರ್ಕಾರದ ಆದೇಶ ಸಂಖ್ಯೆ:ನಅಇ 251 ಬೆಮಪ್ರಾ 2005 ದಿನಾಂಕ:22.12.2005

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಆದೇಶಗಳಲ್ಲಿ ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ, ಜಿಲ್ಲಾ ಮುಖ್ಯ ರಸ್ತೆಗಳಲ್ಲಿ ಮತ್ತು ಸಿಟಿ ಕಾರ್ಪೋರೇಷನ್ ಪರಿಮಿತಿಯಲ್ಲಿನ ಹೆದ್ದಾರಿಗಳ ಅಕ್ಕಪಕ್ಕಗಳಲ್ಲಿ ರಸ್ತೆ ಮಧ್ಯಭಾಗದಿಂದ ನಿಗಧಿಪಸಿದ ಅಗಲಕ್ಕೆ ಯಾವ ಕಟ್ಟಡಗಳನ್ನು ನಿರ್ಮಿಸಕೂಡದು ಹಾಗೂ ಈ ಪರಿಮಿತಿಯಲ್ಲಿ ನಿರ್ಮಾಣ ಮತ್ತು ಅಂಗಡಿಗಳು, ಉಪಾಹಾರ ಗೃಹಗಳು, ಹೋಟೆಲ್ ಗಳು ಮುಂತಾದವುಗಳನ್ನು ನಡೆಸುವುದಕ್ಕೆ ಅನುಮತಿಯನ್ನು ಕೊಡಬಾರದು ಎಂದು ತಿಳಿಸುತ್ತಾ ಗಡಿ ರೇಖೆ ನಿಗಧಿಪಡಿಸಿ ಸೂಚನೆಗಳನ್ನು ಹೊರಡಿಸಲಾಗಿರುತ್ತದೆ.

.....2

ಆದರೆ, ಮೇಲ್ಕಂಡಂತೆ ಆದೇಶಗಳಿದ್ದರೂ ಸಹ ಹೆದ್ದಾರಿಗಳ ಕಟ್ಟಡ ನಿಯಂತ್ರಣ ರೇಖೆಯೊಳಗೆ ಹೆದ್ದಾರಿಗಳ ಕಟ್ಟಡ ನಿರ್ಮಾಣಕ್ಕೆ ಅನುಮತಿ ನೀಡುತ್ತಿರುವುದು ಕಂಡಬಂದಿರುತ್ತದೆ. ಈ ಹಿನ್ನೆಲೆಯಲ್ಲಿ ರಾಷ್ಟ್ರೀಯ ಹೆದ್ದಾರಿ, ರಾಜ್ಯಹೆದ್ದಾರಿ, ಜಿಲ್ಲಾ ಮುಖ್ಯ ರಸ್ತೆಗಳಲ್ಲಿ ಮತ್ತು ಸಿ.ಟಿ ಕಾರ್ಪೂರೇಷನ್ ಪರಿಮಿತಿಯಲ್ಲಿ ಹೆದ್ದಾರಿಗಳಿಗೆ ನಿಗದಿಪಡಿಸಲಾದ ಕಟ್ಟಡ ನಿಯಂತ್ರಣ ರೇಖೆಯೊಳಗೆ ಯಾವುದೇ ಕಟ್ಟಡಗಳನ್ನು ನಿರ್ಮಾಣ ಮಾಡಲು ಅನುಮತಿ ನೀಡದಂತೆ ತಮಗೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಲತಾ.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ
(ಅಭಿವೃದ್ಧಿ ಪ್ರಾಧಿಕಾರ ಮತ್ತು ನಯೋಸೇ)
ನಗರಾಭಿವೃದ್ಧಿ ಇಲಾಖೆ